(ಉ) ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳನ್ನು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ವಹಿಸಿರುವ ಬಗ್ಗೆ

ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಸಭಾಧ್ಯಕ್ಷರೆ, ರಾಜ್ಯದಲ್ಲಿನ ಅಂಗನವಾಡಿ ನೌಕರರ ಕೇಂದ್ರಗಳನ್ನು ಪಂಚಾಯಿತಿಗೆ ವಹಿಸಬೇಕೆನ್ನುವ ಬೇಲೂರು ಘೋಷಣೆಯ ಹಿನ್ನೆಲೆಯಲ್ಲಿ ಸರ್ಕಾರ ಒಂದು ಆದೇಶವನ್ನು ಹೊರಡಿಸಿದೆ. ಆ ಸರ್ಕಾರಿ ಆದೇಶದ ವಿರುದ್ಧ ಇಡೀ ರಾಜ್ಯದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಸುಮಾರು ಎರಡು ತಿಂಗಳಿನಿಂದ ಪ್ರತಿಭಟನೆಯನ್ನು ಮಾಡುತ್ತಿದ್ದಾರೆ.

2.00 ಪಿ.ಎಂ

ಈ ವಿಚಾರದಲ್ಲಿ ಮಾನ್ಯ ಮುಖ್ಯಮಂತ್ರಿಗಳಿಗೆ ಮಾನ್ಯ ಉಪಮುಖ್ಯಮಂತ್ರಿಗಳಿಗೆಲ್ಲಾ ಮನವಿ ಪತ್ರವನ್ನು ಕೊಟ್ಟಿದ್ದಾರೆ. ಮತ್ತೆ ಅದರಲ್ಲಿ ಒಂದು ಕಾನೂನಿನ ವಿಚಾರ ಕೂಡ ಇದೆ. ಐಸಿಡಿಎಸ್ ಕಾರ್ಯಕ್ರಮ ಕೇಂದ್ರ ಸರ್ಕಾರದ್ದಾಗಿರುವುದರಿಂದ ಅದನ್ನು ಪಂಚಾಯತ್ ಸಂಸ್ಥೆಗಳಿಗೆ ಕೊಡಲು ಬರುವುದಿಲ್ಲ. ಇದನ್ನು ಪ್ರತಿಭಟಿಸಿ ಪ್ರತಿವಿರೋಧ ಬಂದಿರುವ ಹಿನ್ನೆಲೆಯಲ್ಲಿ ಇಲ್ಲಿ ನನಗೆ ಕೊಟ್ಟಿರುವ 'ಉತ್ತರದಲ್ಲಿ ಏನು ಹೇಳುತ್ತಾರೆ.

ಅಧ್ಯಕ್ಷರು : ಉತ್ತರ ಒದಗಿಸಿಬಿಟ್ಟಿದ್ದರೆ ಅದನ್ನು ಪ್ರಸ್ತಾಪಿಸುವ ಅಗತ್ಯವೇ ಇರಲಿಲ್ಲ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಇಲ್ಲ, ಇಲ್ಲ, ಅಧ್ಯಕ್ಷರೇ ಅದರಲ್ಲೇನಾಗಿದೆ ಅಂದರೆ 21-1-2004ರ ಬೇಲೂರು ಘೋಷಣೆ ತೀರ್ಮಾನದಂತೆ ಕೇವಲ ಅಂಗನವಾಡಿಗಳ ಉಸ್ತುವಾರಿ ಮತ್ತು ಅಂಗನವಾಡಿ ಕಾರ್ಯಕರ್ತೆರಿಗೆ ರಜೆ ಮಂಜೂರು ಮಾಡುವ ಅಧಿಕಾರವನ್ನು ಮಾತ್ರ ಗ್ರಾಮಪಂಚಾಯಿತಿ ವ್ಯಾಪ್ತಿಗೆ ನೀಡಲಾಗುವುದು ಎಂದಿದೆ. ಇದೇ ಇರುವುದು ಆ ಅಧಿಕಾರವನ್ನು ಉಪಯೋಗಿಸಿಕೊಂಡು ಗ್ರಾಮಪಂಚಾಯಿತಿ ಸದಸ್ಯರುಗಳು ಅಧ್ಯಕ್ಷರುಗಳು ಅವರನ್ನು ದುರುಪಯೋಗ ಮಾಡಿಕೊಳ್ಳುತ್ತಾರೆಂಬುದೇ ಮೇಜರ್ ಪ್ರಾಬ್ಲಂ, ಹಾಗಾಗಿ ರಜೆ ಕೊಡುವ ಅಧಿಕಾರ ಪಂಚಾಯಿತಿಗಳಿಗೆ ಕೊಡಬಾರದು ಅದನ್ನು ತೆಗೆಯಬೇಕು ಎಂಬುದು, ಮತ್ತು 18-8-2003ರಲ್ಲಿ ಗ್ರಾಮಪಂಚಾಯಿತಿಗಳಿಗೆ ಕೊಟ್ಟಿರುವ ಅಧಿಕಾರವನ್ನು ಪುನರ್‌ಪರಿಶೀಲನೆ ಮಾಡುತ್ತೇವೆ ಎಂದು ಉತ್ತರದಲ್ಲಿ ಕೊಟ್ಟಿದ್ದಾರೆ. ನಾನು ಸರ್ಕಾರವನ್ನು ತಮ್ಮ ಮೂಲಕ ಕೇಳುತ್ತಿದ್ದೇನೆ. 18-8-2003ರ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ತರಲಾಗಿರುವ ಕೆಲಸಗಳನ್ನು ಪುನರ್ ಪರಿಶೀಲಿಸಲೇಬೇಕು. ಅಂಗನವಾಡಿ ಕಾರ್ಯಕರ್ತೆಯರನ್ನು ಅವರಿಂದ ತಪ್ಪಿಸಬೇಕು. ಅಷ್ಟೇ ನಾನು ಕೇಳುತ್ತಿರುವುದು.

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಶಾಸಕರು ಹಿರಿಯರು, ಶೂನ್ಯವೇಳೆಯಲ್ಲಿನ ಉತ್ತರವನ್ನು ತಮ್ಮ ಅವಗಾಹನೆಗಾಗಿ ಮೊದಲು ಕಳುಹಿಸಿರುತ್ತಾರೆ. ಅದರ ಮೇಲೆ ಮತ್ತೆ ಚರ್ಚಿಸಲು ಶೂನ್ಯವೇಳೆಯಲ್ಲಿ ಅವಕಾಶ ಇಲ್ಲ. ದಯವಿಟ್ಟು ತಾವು ಸಹಕರಿಸಬೇಕು. ಮಾನ್ಯ ಅಧ್ಯಕ್ಷರೇ, ತಮ್ಮ ಅನುಮತಿ ಪಡೆದು ಈ ಕೆಳಕಂಡ ಉತ್ತರವನ್ನು ಸದನದ ಮುಂದೆ ನೀಡಬಯಸುತ್ತೇನೆ ಆಡಳಿತ ವಿಕೇಂದ್ರೀಕರಣದಲ್ಲಿ ಪಂಚಾಯತ್‌ರಾಜ್ ಸಂಸ್ಥೆಗಳು ಇನ್ನೂ ಹೆಚ್ಚು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಶಕ್ತವಾಗುವಂತೆ ಮತ್ತು ಅವುಗಳನ್ನು ಬಲಪಡಿಸುವ ನಿಟ್ಟಿನಲ್ಲಿ ವಿವಿಧ ಪಂಚಾಯತ್‌ರಾಜ್ ಸಂಸ್ಥೆಗಳು ನಿರ್ವಹಿಸುತ್ತಿರುವ ಕೆಲವು ಕಾರ್ಯ ಚಟುವಟಿಕೆಗಳನ್ನು ಪುನರ್ ವಿಂಗಡಿಸಿ ಸಚಿವಸಂಪುಟ ಅನುಮೋದನೆ ಪಡೆದು ಗ್ರಾಮೀಣಾಭಿವೃದ್ಧಿ

ಮತ್ತು ಪಂಚಾಯತ್‌ರಾಜ್ ಇಲಾಖೆ ಸಂಖ್ಯೆ: ಗ್ರಾ.ಅ.ಪ. 367 ಜಿ.ಪ.ಸ 2002. ದಿನಾಂಕ: 18.8.2003ರಲ್ಲಿ ಅಧಿಸೂಚನೆ ಹೊರಡಿಸಿ ಜಿಲ್ಲಾ ಪಂಚಾಯತ್‌ಗಳು ತಾಲ್ಲೂಕು ಪಂಚಾಯತ್‌ಗಳು ಹಾಗೂ ಗ್ರಾಮ ಪಂಚಾಯತ್‌ಗಳ ಮೂರು ಹಂತದ ಕಾರ್ಯ ಹಂಚಿಕೆ ಮಾಡಲಾಗಿದೆ. ಅದರಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅನುಷ್ಠಾನಗೊಳಿಸುತ್ತಿರುವ ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಐಸಿಡಿಎಸ್) ಕಾರ್ಯಕ್ರಮವನ್ನು ಗ್ರಾಮ ಪಂಚಾಯತ್‌ಗೆ ಹಂಚಿಕೆ ಮಾಡಲಾಗಿದೆ.

ವಿಕೇಂದ್ರೀಕರಣ ಅಂದೋಲನವನ್ನು ಮುನ್ನೆಡಿಸಿಕೊಂಡು ಹೋಗಲು ಮತ್ತು ಪಂಚಾಯತ್‌ರಾಜ್ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಜನರ ಸೇವೆ ಮಾಡಲು ಹೆಚ್ಚಿನ ಅಧಿಕಾರ ಬಯಸಿ ದಿನಾಂಕ: 23.01.2004ರಂದು ಧಾರವಾಡ ತಾಲ್ಲೂಕು ಬೇಲೂರು ಗ್ರಾಮದಲ್ಲಿ ನಡೆದ ಪಂಚಾಯತ್‌ರಾಜ್ ಸದಸ್ಯರ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಸದಸ್ಯರ ಬೇಲೂರು ಘೋಷಣೆ ಕಾರ್ಯಕ್ರಮದಲ್ಲಿ ಅಂಗನವಾಡಿ ಕೇಂದ್ರಗಳನ್ನು ಗ್ರಾಮ ಪಂಚಾಯಿತಿ ಆಡಳಿತ ವ್ಯಾಪ್ತಿಗೆ ತರಲು ಘೋಷಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಅಧಿಸೂಚನೆ ಹಾಗೂ ಈ ಘೋಷಣೆಯನ್ವಯ ಅಂಗನವಾಡಿ ಕೇಂದ್ರಗಳನ್ನು ಗ್ರಾಮ ಪಂಚಾಯತಿ ವ್ಯಾಪ್ತಿಗೆ ತರಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯವತಿಯಿಂದ ಸಂಖ್ಯೆ ಮಮಇ65ಐಸಿಡಿ.2004. ದಿನಾಂಕ: 26.5.2004 ರಲ್ಲಿ ಸುತ್ತೋಲೆ ಹೊರಡಿಸಲಾಗಿದೆ.

ಅಂಗನವಾಡಿ ಕೇಂದ್ರಗಳನ್ನು ಗ್ರಾಮ ಪಂಚಾಯತಿ ಆಡಳಿತ ವ್ಯಾಪ್ತಿಗೆ ತರುವ ವಿಚಾರದಲ್ಲಿ ಬಹಳ ಹಿಂದಿನಿಂದಲೂ ರಾಜ್ಯಾದ್ಯಂತ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಂದ ಹಾಗೂ ಆ ಸಂಘಟನೆಗಳ ಮೂಲಕ ಪ್ರತಿರೋಧ ವ್ಯಕ್ತವಾಗುತ್ತಿದೆ. ಈ ಕೇಂದ್ರಗಳನ್ನು ಗ್ರಾಮ ಪಂಚಾಯಿತಿಗಳಿಂದ ಪ್ರತಿನಿತ್ಯ ಹಸ್ತಕ್ಷೇಪ ಆಗುವುದರ ಜೊತೆಗೆ ಈ ಕಾರ್ಯಕರ್ತೆಯರಿಗೆ ನೀಡಲಾಗುತ್ತಿರುವ ಗೌರವಧನವನ್ನು ಬೇರೆ ವಿಷಯಗಳಿಗೆ ವಿನಿಯೋಗಿಸಿಕೊಂಡು ಇವರುಗಳಿಗೆ ಕ್ರಮಬದ್ಧವಾಗಿ ಮಾಹೆಯಾನ ಗೌರವಧನ ಪಾವತಿ ಆಗುವಲ್ಲಿ ವಿಳಂಬವಾಗುತ್ತದೆ ಎನ್ನುವುದು ಇವರುಗಳ ಆತಂಕವಾಗಿರುತ್ತದೆ. ಆದಾಗ್ಯೂ ಕೂಡ ಆಡಳಿತ ವಿಕೇಂದ್ರೀಕರಣವನ್ನು ಪುನರ್ ವಿಂಗಡಿಸಿ ಮೂರು ಹಂತದ ಪಂಚಾಯತ್‌ರಾಜ್ ಸಂಸ್ಥೆಗಳ ನಡುವೆ ಕಾರ್ಯ ಹಂಚಿಕೆಗಳನ್ನು ಸೂಚಿಸಿ ಹೊರಡಿಸಲಾಗಿರುವ ಅಧಿಸೂಚನೆ ದಿನಾಂಕ: 18.8.2003 ಮತ್ತು ದಿನಾಂಕ: 21.1.2004ರ ಬೇಲೂರು ಘೋಷಣೆಯ ತೀರ್ಮಾನದಂತೆ ಕೇವಲ ಅಂಗನವಾಡಿ ಕೇಂದ್ರಗಳ ಉಸ್ತುವಾರಿ ಮಾಡುವುದು ಮತ್ತು ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರಿಗೆ ಸಾಂದರ್ಭಿಕ ರಜೆ ಮಂಜೂರು ಮಾಡುವ ಅಧಿಕಾರವನ್ನು ಮಾತ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ನೀಡಿದ್ದು ಉಳಿದ ಆರ್ಥಿಕ ಮತ್ತು ಆಡಳಿತಾತ್ಮಕ ಅಧಿಕಾರಗಳನ್ನು ನೀಡಿರುವುದಿಲ್ಲ. ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಗೌರವಧನವನ್ನು ಈಗಿರುವ ವ್ಯವಸ್ಥೆಯಲ್ಲಿಯೇ ಶಿಶು ಅಭಿವೃದ್ಧಿ ಯೋಜನಾಧಿಕಾರಿಯವರ ಕಛೇರಿಯಿಂದ ವಿತರಿಸಲಾಗುವುದು.

ರಾಜ್ಯದಲ್ಲಿ ಅಭಿವೃದ್ಧಿ ಇಲಾಖೆಗಳ ಕೆಳಹಂತದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದನ್ನು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ತರಲಾಗಿದ್ದು ಇದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಮಾತ್ರ ಸೀಮಿತವಾಗಿರುವುದಿಲ್ಲ. ಇತರೆ ಅಭಿವೃದ್ಧಿ ಇಲಾಖೆಗಳಿಂದ ಈ

ಬದಲಾವಣೆಗೆ ತೊಂದರೆ ಉಂಟಾದಲ್ಲಿ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಇಲಾಖೆಯು ಹೊರಡಿಸಿರುವ ಅಧಿಸೂಚನೆ ದಿ:18.8.2003ರಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ತರಲಾಗಿರುವ ಕಾರ್ಯಕ್ರಮಗಳನ್ನು ಪುನರ್‌ಪರಿಶೀಲಿಸಲಾಗುವುದು.

ಅಧ್ಯಕ್ಷರು : ಈಗ ಸದನವನ್ನು ಮಧ್ಯಾಹ್ನ ಮೂರು ಘಂಟೆಯವರೆಗೂ ಮುಂದೂಡಲ್ಪಟ್ಟಿದೆ.

ಸದನವು ಪುನಃ ಮಧ್ಯಾಹ್ನ 3 ಗಂಟೆ 10 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರಾದ (ಶ್ರೀ ಕೃಷ್ಣ) ರವರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು

3. ಅಧ್ಯಕ್ಷರ ತೀರ್ಪು :

ವಿಷಯ: ಸದನದಲ್ಲಿ ಮಾನ್ಯ ಸದಸ್ಯರುಗಳ ಮೊಬೈಲ್ ಫೋನ್‌ಗಳನ್ನು ನಿಷೇದಿಸಿರುವುದು.

ಅಧ್ಯಕ್ಷರು : ನಾನು ಮಾನ್ಯ ಸದಸ್ಯರುಗಳ ಗಮನಕ್ಕೆ ತರುವುದೇನೆಂದರೆ, ಅನೇಕ ಸದಸ್ಯರುಗಳು ಮೊಬೈಲ್ ಫೋನ್‌ಗಳನ್ನು ಸದನದೊಳಗೆ ತರುವ ಪರಿಪಾಠ ಇಟ್ಟುಕೊಂಡಿದ್ದು, ಇದರಿಂದಾಗಿ ಸದನದ ಕಲಾಪಕ್ಕೆ ಧಕ್ಕೆಯುಂಟಾಗುವುದರಿಂದ ಯಾವುದೇ ಮಾನ್ಯ ಸದಸ್ಯರು ಮೊಬೈಲ್ ಫೋನ್ ಗಳನ್ನು ಸದನದೊಳಗೆ ತರಬಾರದೆಂದು ವಿನಂತಿಸಿಕೊಳ್ಳುತ್ತೇನೆ.

4. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು :

ಊ) ವಿಷಯ: ತೆಂಗಿನ ಮರಗಳಿಗೆ ಹಬ್ಬಿರುವ ನುಸಿ ಪೀಡೆ ಭಾದೆ.

ಶ್ರೀ ಜೆ.ಸಿ. ಮಾಧುಸ್ವಾಮಿ : ಮಾನ್ಯ ಅಧ್ಯಕ್ಷರೆ, ತೆಂಗಿನ ಮರಗಳಿಗೆ ಹಬ್ಬಿರುವ ನುಸಿಪೀಡೆ ಬಾಧೆ ಕುರಿತಂತೆ ಚರ್ಚೆಗೆ ಅವಕಾಶ ಮಾಡಿಕೊಡುವುದಾಗಿ ತಿಳಿಸಿದ್ದೀರಿ. ಈಗ ಈ ಕುರಿತಾದ ಚರ್ಚೆಗೆ ತಾವು ಅವಕಾಶ ಕಲ್ಪಿಸಿಕೊಡಬೇಕು.

ಋ) ವಿಷಯ : ಕೂಲಿಗಾಗಿ ಕಾಳು ಯೋಜನೆಯಲ್ಲಿನ ಅಕ್ಕಿ ಹಾಳಾಗುತ್ತಿರುವ ಬಗ್ಗೆ.

ಶ್ರೀ ಎ.ಟಿ. ರಾಮಸ್ವಾಮಿ : ಮಾನ್ಯ ಅಧ್ಯಕ್ಷರೆ, ಕೂಲಿಗಾಗಿ ಕಾಳು ಯೋಜನೆಗೆ ಮೀಸಲಿಟ್ಟ ಅಕ್ಕಿ ಹಾಳಾಗುತ್ತಿರು ಹಾಗೂ ಯೋಜನೆ ಸ್ಥಗಿತಗೊಂಡಿರುವ ಬಗ್ಗೆ ನಾನು ಮಾನ್ಯ ಕಂದಾಯ ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯಬೇಕಾಗಿದೆ.

ಶ್ರೀ ಕೆ.ಎಂ. ಕೃಷ್ಣಮೂರ್ತಿ : ಮಾನ್ಯ ಅಧ್ಯಕ್ಷರೆ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಗಳಲ್ಲಿ ಸುಮಾರು 20,000 ಮೆಟ್ರಿಕ್ ಟನ್ ಗಳಷ್ಟು... .. ಇದು ಬಹಳ ಪ್ರಮುಖವಾದ ವಿಚಾರವಾಗಿರುವುದರಿಂದ ಪ್ರಸ್ತಾಪಿಸಲು ಅವಕಾಶ ಕಲ್ಪಿಸಿಕೊಡಬೇಕು.

ಅಧ್ಯಕ್ಷರು : ತಮಗೆಲ್ಲರಿಗೂ ವಿಷಯಗಳನ್ನು ಪ್ರಸ್ತಾಪಿಸಲು ನಾಳೆ ಅವಕಾಶ ಮಾಡಿಕೊಡುತ್ತೇನೆ. ತಾವು ದಯವಿಟ್ಟು ಕುಳಿತುಕೊಳ್ಳಬೇಕು.

ಈಗ ಮಾನ್ಯ ವಿರೋಧ ಪಕ್ಷದ ನಾಯಕರು 2004–05ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಚರ್ಚೆ ಪ್ರಾರಂಭಿಸಬೇಕು.

5. ವಿತ್ತೀಯ ಕಾರ್ಯಕಲಾಪಗಳು

2004–05ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಚರ್ಚೆ

†**ಶ್ರೀ ಬಿ.ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು) :** ಸನ್ಮಾನ್ಯ ಅಧ್ಯಕ್ಷರೆ, ಆಯವ್ಯಯ ಅಂದಾಜುಗಳ ಮೇಲೆ ಮಾತನಾಡುವಾಗ 'ವಿರೋಧ ಪಕ್ಷದ ನಾಯಕ'